**(13) ಮೌಖಿಕ ಪರೀಕ್ಷೆ (ಜೈಲರ್ ಹುದ್ದೆಗೆ) :** ದೈಹಿಕ ಸಾಮರ್ಥ್ಯ, ದೇಹದಾರ್ಢ್ಯತೆ ಹಾಗೂ ದೈಹಿಕ ಅರ್ಹತೆ ಪರೀಕ್ಷೆಯಲ್ಲಿ ತೇರ್ಗಡೆಯಾದ ಜೈಲರ್ ಹುದ್ದೆಯ ಅಭ್ಯರ್ಥಿಗಳಿಗೆ **1:3** ಪ್ರಮಾಣದಲ್ಲಿ **5** ಅಂಕಗಳ ಮೌಖಿಕ ಸಂದರ್ಶನ ನಡೆಸಲಾಗುವುದು. ಸಂದರ್ಶನಕ್ಕೆ ಅರ್ಹರಾಗುವ ಅಭ್ಯರ್ಥಿಗಳಿಗೆ ಇಲಾಖೆಯ ವೆಬ್-ಸೈಟ್‌ನಲ್ಲಿ ಕರೆ ಪತ್ರವನ್ನು ಅಪ್‌ಲೋಡ್ ಮಾಡಲಾಗುವುದು, ಅದನ್ನು ಅಭ್ಯರ್ಥಿಗಳು ಡೌನ್‌ಲೋಡ್ ಮಾಡಿಕೊಂಡು ಲಿಖಿತ ಪರೀಕ್ಷೆಗೆ ಅಥಾವ ದೈಹಿಕ ಸಾಮರ್ಥ್ಯ ಪರೀಕ್ಷೆಗೆ ತೆಗೆದುಕೊಂಡು ಹೋಗಲಾಗಿರುವ ಗುರುತಿನ ಚೀಟಿಯೊಂದಿಗೆ ನೇಮಕಾತಿ ಸಮಿತಿಯ ಮುಂದೆ ಸಂದರ್ಶನಕ್ಕೆ ಹಾಜರಾಗಬೇಕಾಗುವುದು. ಈ ಮೌಖಿಕ ಪರೀಕ್ಷೆಯಲ್ಲಿ ಕನಿಷ್ಠ ಅಂಕಗಳು ಇರುವುದಿಲ್ಲ. ಅಭ್ಯರ್ಥಿಗಳು ಮೌಖಿಕ ಪರೀಕ್ಷೆಯ ದಿನಾಂಕ, ಸಮಯ ಮತ್ತು ಸ್ಥಳದ ಮಾಹಿತಿಯನ್ನು ಒಳಗೊಂಡ ಕರೆ ಪತ್ರಗಳನ್ನು ಈ ಕಛೇರಿಯ ಅಧಿಕೃತ ವೆಬ್‌ಸೈಟ್ www.karnatakaprisons.in ನಿಂದ ಪಡೆದುಕೊಳ್ಳಬೇಕು. ಅಭ್ಯರ್ಥಿಗಳು ಎಲ್ಲಾ ಮೂಲ ದಾಖಲಾತಿಗಳನ್ನು ಮೌಖಿಕ ಪರೀಕ್ಷೆ ಪ್ರಾರಂಭವಾಗುವ ಮುನ್ನ ಹಾಜರುಪಡಿಸಬೇಕು.

(14) **ಪ್ರಮಾಣ ಪತ್ರಗಳು :-** ಅಭ್ಯರ್ಥಿಗಳು ಈ ಕೆಳಕಂಡ ಪ್ರಮಾಣ ಪತ್ರಗಳನ್ನು ತಮ್ಮಲ್ಲಿ ಇಟ್ಟುಕೊಂಡಿದ್ದು, ಮೂಲ ದಾಖಲಾತಿಗಳ ಪರಿಶೀಲನೆಯ ಸಂದರ್ಭದಲ್ಲಿ ಸಮಿತಿಯ ಮುಂದೆ ಹಾಜರುಪಡಿಸತಕ್ಕದ್ದು.

14.1) ಜನ್ಮ ದಿನಾಂಕವನ್ನೊಳಗೊಂಡ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯ ಅಂಕಪಟ್ಟಿ / ವರ್ಗಾವಣೆ ಪತ್ರ.

14.2) ಪದವಿ ಪರೀಕ್ಷೆಯ ಅಂಕಪಟ್ಟಿ/ಪದವಿ ಪ್ರಮಾಣ ಪತ್ರ (ಜೈಲರ್ ಹುದ್ದೆಗೆ)

14.3) ಸರ್ಕಾರಿ ಇಲಾಖೆಯಲ್ಲಿ/ ರಾಜ್ಯ ಸರ್ಕಾರದ/ ಕೇಂದ್ರ ಸರ್ಕಾರದ/ ಸರ್ಕಾರದ ಯಾವುದೇ ಪ್ರಾಧಿಕಾರದಲ್ಲಿ/ ರಾಜ್ಯ ಅಥವಾ ಕೇಂದ್ರ ಸರ್ಕಾರದ ಸಾರ್ವಜನಿಕ ಸ್ವಾಮ್ಯದ ಕಂಪನಿಗಳಲ್ಲಿ ಪ್ರಸ್ತುತ

ಉದ್ಯೋಗಿಯಾಗಿದ್ದಲ್ಲಿ, ಅಂತಹವರು ಇಲಾಖಾ ವತಿಯಿಂದ ಕರ್ತವ್ಯದಿಂದ ಬಿಡುಗಡೆ ಮಾಡುವ ಬಗ್ಗೆ ಇಚ್ಛಾ ಅನುಮತಿ ಪತ್ರ.

14.4) ಕಂಪ್ಯೂಟರ್ ಪರಿಣತಿಯನ್ನು ಹೊಂದಿದವರಾಗಿದ್ದರೆ, ಆ ಬಗ್ಗೆ ಪ್ರಮಾಣ ಪತ್ರ.